ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU
CITY UNIVERSITY

Office of the Vice-Chancellor, Central College Campus, Dr. B.R Ambedkar Veedhi,
Bengaluru – 560001 Ph.No.080-22961015 / 22131384, E-mail: bcuccb@gmail.com

ಸಂಖ್ಯೆ: ಬೆಂ.ನ.ವಿ/ಕೋವಿಡ್ ಲಸಿಕಾ ಅಭಿಯಾನ/03/2021-22 ದಿನಾಂಕ:03.07.2021

## ಸುತ್ತೋಲೆ

**ವಿಷಯ:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜು ಆವರಣದಲ್ಲಿ ಕೋವಿಡ್ ಲಸಿಕಾ ಅಭಿಯಾನವನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ: ಕುಲಪತಿಗಳ ಅನುಮೋದನೆಯ ದಿನಾಂಕ: 02.07.2021.

********

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ಶಿಕ್ಷಕ, ಶಿಕ್ಷಕೇತರ ಹಾಗೂ ಸ್ನಾತಕೋತ್ತರ, ಸಂಶೋಧನಾ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸೆಂಟ್ರಲ್ ಕಾಲೇಜು ಆವರಣದಲ್ಲಿ ಕೆನರಾ ಬ್ಯಾಂಕ್ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಕಟ್ಟಡದಲ್ಲಿ ದಿನಾಂಕ:06.07.2021 ಮಂಗಳವಾರದಿಂದ 08.07.2021 ಗುರುವಾರದವರೆಗೆ ಬೆಳಿಗ್ಗೆ 11.00 ಗಂಟೆಯಿಂದ ಸಂಜೆ 4.30 ಗಂಟೆಗೆ ಕೋವಿಡ್ -19 ಲಸಿಕೆ ಅಭಿಯಾನ ಕಾರ್ಯಕ್ರಮವನ್ನು ಆಯೋಜಿಸಿದ್ದು, ಇದುವರೆವಿಗೆ ಲಸಿಕೆ ಪಡೆಯದ ವಿದ್ಯಾರ್ಥಿಗಳು, ಬೋಧಕ, ಬೋಧಕೇತರ, ಬೆಂಬಲಿತ ಖಾಯಂ ಹಾಗೂ ಸಂಚಿತ ವೇತನ, ಹೊರಗುತ್ತಿಗೆ ನೌಕರರು ಸೇರಿದಂತೆ ಈ ಲಸಿಕಾ ಅಭಿಯಾನದ ಪ್ರಯೋಜನವನ್ನು ಪಡೆದುಕೊಳ್ಳುವುದು.

**ವಿಶ್ವವಿದ್ಯಾನಿಲಯದ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ತಪ್ಪದೇ ಗುರುತಿನ ಚೀಟಿ ಮತ್ತು ಆಧಾರ್ ಕಾರ್ಡ್‌ನ್ನು ತರತಕ್ಕದ್ದು. ವಿಶ್ವವಿದ್ಯಾನಿಲಯದ ಬೋಧಕ, ಬೋಧಕೇತರ ಬೆಂಬಲಿತ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳನ್ನು ಹೊರತುಪಡಿಸಿ, ಇತರರಿಗೆ ಯಾವುದೇ ಕಾರಣಕ್ಕೂ ಲಸಿಕೆಯನ್ನು ನೀಡಲಾಗುವುದಿಲ್ಲ.**

**ಎಲ್ಲಾ ಸಿಬ್ಬಂದಿಗಳು, ವಿದ್ಯಾರ್ಥಿಗಳು ಕಡ್ಡಾಯವಾಗಿ ಮಾಸ್ಕ್ ಧರಿಸುವುದು ಹಾಗೂ ಲಸಿಕೆ ಪಡೆಯುವ ಸಾಲಿನಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಲು ಸೂಚಿಸಲಾಗಿದೆ.**

ಆದೇಶದ ಮೇರೆಗೆ,
3/7/2021
ಕುಲಸಚಿವರು

**ಗೆ,**
ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗದ ಮುಖ್ಯಸ್ಥರುಗಳಿಗೆ,
ವಿಶ್ವವಿದ್ಯಾನಿಲಯದ ಎಲ್ಲಾ ಅಧಿಕಾರಿಗಳಿಗೆ

**ಸದರಿ ಮಾಹಿತಿಯನ್ನು ತಮ್ಮ ತಮ್ಮ ವಿಭಾಗಗಳ ವಿದ್ಯಾರ್ಥಿಗಳ ಹಾಗೂ ಸಿಬ್ಬಂದಿಗಳ ಗಮನಕ್ಕೆ ತಪ್ಪದೇ ತರಲು ಕೋರಲಾಗಿದೆ.**

**ಪ್ರತಿಯನ್ನು**

1. ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ, ಪೂರ್ವ ವಲಯ, ಮೆಯೋಹಾಲ್, ಬೆಂಗಳೂರು
2. ಕುಲಪತಿಗಳು/ಕುಲಸಚಿವರು/ಕುಲಸಚಿವರು (ಮೌ), ವಿತ್ತಾಧಿಕಾರಿಗಳ ಆಪ್ತ ಸಹಾಯಕರುಗಳಿಗೆ, ಬೆಂ.ನ.ವಿ
3. ಕಛೇರಿ ಪ್ರತಿ.